ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 30–08–2017

# ಪತ್ರಿಕಾ ಆಮಂತ್ರಣ

1. **ನಗರೋತ್ಥಾನ (ಮುನಿಸಿಪಾಲಿಟಿ) 3ನೇ ಹಂತದ ಯೋಜನೆಯ ಚಾಲನಾ ಸಮಾರಂಭ:**

**ಯೋಜನೆಗೆ ಚಾಲನೆ:**
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು.

**ಪ್ರಾಸ್ತಾವಿಕ ಭಾಷಣ**
ಈಶ್ವರ್ ಬಿ. ಖಂಡ್ರೆ, ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.

**ಮುಖ್ಯ ಅತಿಥಿಗಳು:**
ಕೆ.ಜೆ. ಜಾರ್ಜ್
ಬೆಂಗಳೂರು ನಗರ ಅಭಿವೃದ್ಧಿ, ನಗರ ಯೋಜನೆ ಮತ್ತು ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.

**ಅಧ್ಯಕ್ಷತೆ:**
ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

ದಿನಾಂಕ: 31–08–2017, ಗುರುವಾರ, ಸಮಯ ಬೆಳಿಗ್ಗೆ 11.00 ಗಂಟೆಗೆ.
ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು – 560 001.

# ಪತ್ರಕರ್ತರ ಗಮನಕ್ಕೆ

## ದಸರಾ ಮಹೋತ್ಸವ – 2017 ರ ವರದಿಗಾಗಿ ಮಾಧ್ಯಮದವರಿಗೆ ಪಾಸ್ ನೀಡುವ ಕುರಿತು.

ದಸರಾ ಮಹೋತ್ಸವ –2017 ರ ವರದಿಗಾಗಿ ಆಗಮಿಸುವ ಮಾಧ್ಯಮ ಪ್ರತಿನಿಧಿಗಳಿಗೆ ಪಾಸ್ ನೀಡಲು ಕಾರ್ಯಸೂಚಿ ರೂಪಿಸಲಾಗಿದ್ದು, ಕಾರ್ಯಸೂಚಿಯನ್ವಯ ಮಾಧ್ಯಮ ಪಾಸ್ ನೀಡಲಾಗುವುದು.

ಮೈಸೂರು ಹೊರತುಪಡಿಸಿ ಇತರೆ ಜಿಲ್ಲಾ ಕೇಂದ್ರಗಳು, ರಾಜ್ಯ ಹಾಗೂ ರಾಷ್ಟ್ರಮಟ್ಟದ ಮಾನ್ಯತೆ ಪಡೆದ ಮಾಧ್ಯಮ ಪ್ರತಿನಿಧಿಗಳಿಗೆ  ಈ ಕೆಳಗಿನಂತೆ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ಶಿಫಾರಸ್ಸಿಗೆ ಅನುಗುಣವಾಗಿ ಪಾಸ್ ವಿತರಿಸಲಾಗುವುದು.

ಇತರ ಜಿಲ್ಲಾ ಕೇಂದ್ರಗಳಿಂದ ಪ್ರಕಟವಾಗುವ ಪತ್ರಿಕೆಗಳ ಮಾನ್ಯತೆ ಪಡೆದ ವರದಿಗಾರರು – ಒಬ್ಬರು, ರಾಜ್ಯ ಮಟ್ಟದ ಪತ್ರಿಕೆಗಳು – ಮಾನ್ಯತೆ ಪಡೆದ ಒಬ್ಬ ವರದಿಗಾರ ಹಾಗೂ ಒಬ್ಬ ಛಾಯಾಗ್ರಾಹಕ,  ಉಪಗ್ರಹ ವಾಹಿನಿಗಳು – ಮಾನ್ಯತೆ ಪಡೆದ ಇಬ್ಬರು ವರದಿಗಾರರು ಹಾಗೂ ಇಬ್ಬರು ಕ್ಯಾಮೆರಾಮೆನ್‍ಗಳಿಗೆ ಪಾಸ್ ನೀಡಲಾಗುವುದು.

ನೇರಪ್ರಸಾರವಿದ್ದಲ್ಲಿ ಹೆಚ್ಚಿನ ಪಾಸ್‍ಗಳ ಅಗತ್ಯವಿದ್ದಲ್ಲಿ ಉಪ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮೈಸೂರು ಇಲ್ಲಿ ನೇರವಾಗಿ ಸಂಪರ್ಕಿಸಬಹುದು.

ಮಾಧ್ಯಮ ಕಚೇರಿಯಿಂದ ಮಾಧ್ಯಮ ಪ್ರತಿನಿಧಿಗಳ ಪಟ್ಟಿಯನ್ನು ಭರ್ತಿಮಾಡಿದ  ನಿಗದಿತ ನಮೂನೆ ಸಹಿತ ಪ್ರತಿ ವ್ಯಕ್ತಿಯ  ಇತ್ತೀಚಿನ  ಎರಡು ಭಾವಚಿತ್ರದೊಂದಿಗೆ ಆಗಸ್ಟ್ 31 ರ ಸಂಜೆ 5.00 ಗಂಟೆಯೊಳಗೆ ಸುದ್ದಿ ಮತ್ತು ಪತ್ರಿಕಾ ವಿಭಾಗದ ವಾರ್ತಾ ಸಹಾಯಕರಾದ ಜಿ. ಜಡಿಯಪ್ಪ ಅವರಲ್ಲಿ ಸಲ್ಲಿಸಲು ಕೋರಿದೆ.

ನಿರ್ದೇಶಕರ ಪರವಾಗಿ.

ಸಂಖ್ಯೆ 109/109

## ಪತ್ರಿಕಾ ಪ್ರಕಟಣೆ

## ರೈತರ ಸುಸ್ಥಿರ ಜೀವನಾಧಾರಕ್ಕೆ ‘ಸಮಗ್ರ ಕೃಷಿ ಪದ್ಧತಿ ಉತ್ತಮ ಮಾರ್ಗ’

ಬೆಂಗಳೂರು, ಆ. 30:  (ಕರ್ನಾಟಕ ವಾರ್ತೆ)

ರೈತರ ಆಹಾರ ಭದ್ರತೆ, ಪೌಷ್ಠಿಕ ಆಹಾರದ ಲಭ್ಯತೆಯನ್ನು ನೀಗಿಸುವಲ್ಲಿ ಮತ್ತು ಹೆಚ್ಚಿನ ಉತ್ಪಾದಕತೆ ಹಾಗೂ ಲಾಭವನ್ನು ಹೊಂದಲು  ‘ಸಮಗ್ರ ಕೃಷಿ ‘ ಪದ್ಧತಿ ಅತ್ಯುತ್ತಮವಾಗಿದ್ದು, ರೈತರು ಲಭ್ಯವಿರುವ ನೈಸರ್ಗಿಕ ಸಂಪತ್ತನ್ನು ಸಮರ್ಪಕವಾಗಿ ಬಳಸಿಕೊಂಡು ಅತಿ ಕಡಿಮೆ ಬಂಡವಾಳದಲ್ಲಿ ಹೆಚ್ಚಿನ ಆದಾಯ ಪಡೆಯಬಹುದಾಗಿದೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಕುಲಪತಿ ಡಾ. ಹೆಚ್. ಶಿವಣ್ಣ ಅವರು ತಿಳಿಸಿದರು.

ಕೃಷಿ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾನಿಲಯ ಸಹಯೋಗದಲ್ಲಿ ಇಂದು ಕೃಷಿ ವಿ.ವಿ.ಯ ಕುವೆಂಪು ಸಭಾಂಗಣದಲ್ಲಿ ಏರ್ಪಡಿಸಿದ್ದ " ಸಮಗ್ರ ಕೃಷಿ" ಯಲ್ಲಿ ಯಶಸ್ವಿ ರೈತರ ಅನುಭವ–ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ಸತತ ಬರ ಪರಿಸ್ಥಿತಿಯಿಂದ ರೈತರು ಇಂದು ಕೃಷಿ /ತೋಟಗಾರಿಕೆ ಬೆಳೆಗಳಲ್ಲಿ ತೊಡಗಿಸಿರುವ ಬಂಡವಾಳವನ್ನು ಮರಳಿಪಡೆಯಲು ಸಾಧ್ಯವಾಗುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಬೇಸಾಯದ ಜೊತೆಯಲ್ಲಿ ಇತರೆ ಉಪಕಸುಬುಗಳಾದ ಹೈನುಗಾರಿಕೆ, ಕುರಿ/ಮೇಕೆ ಸಾಕಾಣಿಕೆ, ಹಂದಿ ಸಾಕಾಣಿಕೆ, ಜೇನುಸಾಕಾಣಿಕೆ, ಅಣಬೆ ಬೇಸಾಯ, ರೇಷ್ಮೆ ಕೃಷಿ ಮುಂತಾದ ಉಪಕಸುಬುಗಳಿಂದ ನಿರಂತರವಾಗಿ ಆದಾಯವನ್ನು ಗಳಿಸಬಹುದಾಗಿದೆ ಎಂದರು.

ಸಮಗ್ರ ಕೃಷಿ ಪದ್ದತಿಯನ್ನು ಅಳವಡಿಸಿಕೊಳ್ಳುವುದರಿಂದ ಕೃಷಿ ತ್ಯಾಜ್ಯ ವಸ್ತುಗಳ ಸಮರ್ಪಕ ಮರುಬಳಕೆ, ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳುವಿಕೆ, ಪರಿಸರ ಸಮತೋಲನ ಕಾಪಾಡಿಕೊಳ್ಳುವುದು, ನೈಸರ್ಗಿಕ ಸಂಪನ್ಮೂಲಗಳ ಸಮರ್ಪಕ ಬಳಕೆ, ಹೆಚ್ಚಿನ ಉತ್ಪಾದಕತೆ, ಉದ್ಯೋಗ ಸೃಷ್ಠಿಯಾಗಲಿದ್ದು ರೈತರಲ್ಲಿ ನಂಬಿಕೆ, ವಿಶ್ವಾಸ, ಆತ್ಮಸ್ಥೈರ್ಯ ಹೆಚ್ಚುತ್ತದೆ ಎಂದರು.

ಕೃಷಿ ವಿ.ವಿ.ಯ ತಜ್ಞರಾದ ಡಾ. ಸಂಜಯ್ ಅವರು "ಅಧಿಕ ಉತ್ಪಾದನೆ ಮತ್ತು ಆದಾಯ ಗಳಿಸಲು ಇರುವ ತೊಡರುಗಳ " ವಿಷಯ ಕುರಿತು ಮಾತನಾಡಿ ರಾಸಾಯನಿಕ ಗೊಬ್ಬರವನ್ನು ಇಂದು ನಾವು ಹೆಚ್ಚಿಗೆ ಬಳಸುತ್ತಿರುವ ಕಾರಣ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತಿದೆ, ಸಾವಯವ ಗೊಬ್ಬರ ಬಳಕೆ ಸಹ ಇಂದು ಕಡಿಮೆಯಾಗಿದ್ದು, ಉತ್ಪಾದನೆಗೆ ಇದು ತೊಡಕಾಗಿದೆ ಎಂದರು.

ಸೂಕ್ತವಾದ ಹಾಗೂ ಅಧಿಕ ಆದಾಯ ನೀಡಬಲ್ಲ ಸಮಗ್ರ ಕೃಷಿ ಪದ್ಧತಿ ಅಳವಡಿಕೆಯು ಆಯಾ ಪ್ರದೇಶದ ಹವಾಗುಣ, ದೊರಕುವ ಸಂಪನ್ಮೂಲ ಮತ್ತು ಇತರೆ ಪರಿಕರಗಳ ಮೇಲೆ ಅವಲಂಬಿತವಾಗಿದ್ದು, ಸಮಗ್ರ ಕೃಷಿ ಪದ್ದತಿಯನ್ನು ಹಿಡುವಳಿ ಗಾತ್ರದ ಅನುಸಾರ ಅಳವಡಿಕೆ ಮಾಡಿಕೊಳ್ಳಬಹುದಾಗಿದೆ ಎಂದರು.

ಕೃಷಿ ಆಯುಕ್ತರಾದ ಜಿ.ಸತೀಶ್ ಅವರು ಪ್ರಾಸ್ತವಿಕವಾಗಿ ಮಾತನಾಡಿ ಎಲ್ಲರನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ರೈತರು, ಕೃಷಿ ತಜ್ಞರು ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಎಂಆರ್‌ಎಂ

ಸಂಖ್ಯೆ 110/110

# ಬೆಂಗಳೂರು, ಮಂಗಳೂರಿಗೆ ಸಮುದ್ರದಡಿಯಿಂದ ಶುದ್ಧ ಕುಡಿಯುವ ನೀರು ಪಡೆಯುವ ಪ್ರಸ್ತಾವನೆ ಕುರಿತು ಸಮಾಲೊಚನೆ – ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು, ಆಗಸ್ಟ್ 30. (ಕರ್ನಾಟಕ ವಾರ್ತೆ)

ಬೆಂಗಳೂರು ನಗರ ಸೇರಿದಂತೆ ಪ್ರಮುಖ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ವಿಚಾರದಲ್ಲಿ ರಾಜ್ಯ ಸರ್ಕಾರ ವಿಶೇಷ ಗಮನ ನೀಡುತ್ತಿದೆ. ಈ ಕುರಿತು ಭಾರತೀಯ ವಿಜ್ಞಾನ ಸಂಸ್ಥೆಯ ಹಿರಿಯ ಪ್ರಾಧ್ಯಾಪಕ ಪ್ರೊ. ಸೀತಾರಾಂ ನೀಡಿರುವ ಕಾರ್ಯ ಯೋಜನಾ ವರದಿ ಕುರಿತಂತೆ ಜಲ ಮಂಡಳಿಯ ಹಿರಿಯ ಅಧಿಕಾರಿಗಳ ಜೊತೆ ಇಂದು ಸಮಾಲೋಚನೆ ನಡೆಸಲಾಯಿತು ಎಂದು ಬೆಂಗಳೂರು ನಗರ ಅಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಹಿರಿಯ ಅಧಿಕಾರಿಗಳ ಸಭೆಯ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಕರಾವಳಿ ಪ್ರದೇಶದಲ್ಲಿ ವಾರ್ಷಿಕವಾಗಿ ಸುಮಾರು 300 ರಿಂದ 350 ಟಿಎಂಸಿ ನೀರು ವ್ಯರ್ಥವಾಗಿ ಸಮುದ್ರ ಸೇರುತ್ತಿದೆ. ಸಮುದ್ರದ ಒಳಗಿರುವ ಸುಮಾರು 22 ಟಿಎಂಸಿ ಯಷ್ಟು ನೀರನ್ನು ಬೆಂಗಳೂರು ಮತ್ತು ಮಂಗಳೂರು ನಗರಗಳಿಗೆ ಕುಡಿಯುವ ಸಲುವಾಗಿ ಸಮುದ್ರದ ಆಳದಿಂದ ಪಡೆಯುವ ಯೋಜನೆಯ ಬಗ್ಗೆ ಸಮಾಲೋಚನೆ ನಡೆಸಲಾಯಿತು ಎಂದು ಸಚಿವರು ತಿಳಿಸಿದರು.

ಮಂಗಳೂರಿನಲ್ಲಿ ಪ್ರೋ ಸೀರಾರಾಂ ನೇತೃತ್ವದ ತಂಡ ಸ್ಥಳೀಯ ಚುನಾಯಿತ ಪ್ರತಿನಿಧಿಗಳಿಗೆ ಈಗಾಗಲೇ ಪ್ರಾತ್ಯಕ್ಷತೆ ನೀಡಿದ್ದು ಇನ್ನೊಂದು ಸುತ್ತಿನ ಸಮಾಲೋಚನೆ ನಂತರ ವಿಸ್ಮೃತ ಯೋಜನಾ ವರದಿಯನ್ನು ಅಂತಿಮಗೊಳಿಸಿ ಸಚಿವ ಸಂಪುಟದ ಮುಂದೆ ಪ್ರಸ್ತಾವನೆ ಮಂಡಿಸಲಾಗುವುದು ಎಂದರು.

ಸಮುದ್ರದಿಂದ ಸುಮಾರು 22 ಟಿಎಂಸಿ ಯಷ್ಟು ನೀರನ್ನು ಮೇಲೆತ್ತಿ ಕುಡಿಯುಲು ಬಳಕೆ ಮಾಡುವ ಯೋಜನೆಗೆ ಅಂದಾಜು 2500 ಕೋಟಿ ರೂ. ವೆಚ್ಚವಾಗುವ ಸಾಧ್ಯತೆ ಇದೆ ಎಂದು

ವಿಜ್ಞಾನಿಗಳು ತಿಳಿಸಿದ್ದಾರೆ. ಈಗಾಗಲೇ ಇಂತಹ ಯೋಜನೆ ಹಾಂಕಾಂಗ್ ಸೇರಿದಂತೆ ಏಳು ದೇಶಗಳಲ್ಲಿ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ಬೆಂಗಳೂರು ನಗರ ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆಗೆ ಆದ್ಯತೆ ನೀಡಲಾಗುವುದು ಎಂದರು.

ಬೆಂಗಳೂರು ನಗರದಲ್ಲಿ ಪೌರ ಕಾರ್ಮಿಕರ ಸಮಸ್ಯೆಗಳ ನಿವಾರಣೆಗೆ ಪಾಲಿಕೆ ಆಯುಕ್ತರು ಸಮಾಲೋಚನೆ ನಡೆಸಿದ್ದು ಇನ್ನೆರಡು ದಿನಗಳಲ್ಲಿ ಸಮಸ್ಯೆ ಇತ್ಯರ್ಥವಾಗಲಿದೆ ಎಂದು ತಿಳಿಸಿದ ಸಚಿವರು ಬೆಂಗಳೂರು ನಗರದಲ್ಲಿ ಮಳೆಯಿಂದ ಆಗಿರುವ ಹಾನಿಯನ್ನು ಅಂದಾಜು ಮಾಡಲಾಗುತ್ತಿದ್ದು ಎಲ್ಲೆಡೆ ಒಳಚರಂಡಿ ದುರಸ್ಥಿ ಕಾರ್ಯ ಭರದಿಂದ ಸಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಅಭಿವೃದ್ಧಿಗೆ ವಿಶೇಷ ಒತ್ತು ನೀಡುವುದರಿಂದ ಹೆಚ್ಚು ಸಂಪನ್ಮೂಲವನ್ನು ಬಿಡುಗಡೆಮಾಡಿದ್ದಾರೆ. ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಎಸ್ಎಂ;ಕೆಪಿಪಿ:ಜೆಡಿ:ಜಿಪಿಆರ್.

ಸಂಖ್ಯೆ 111/111

**ತಿರು ಓಣಂ ಹಬ್ಬದ ಪ್ರಯುಕ್ತ ಕರಾರಸಾ ನಿಗಮದಿಂದ ವಿಶೇಷ ಸಾರಿಗೆ ವ್ಯವಸ್ಥೆ**

**ಬೆಂಗಳೂರು, ಆ. 30: (ಕರ್ನಾಟಕ ವಾರ್ತೆ)**

ತಿರು ಓಣಂ ಹಬ್ಬದ ಪ್ರಯುಕ್ತ ಕರಾರಸಾ ನಿಗಮದ ವತಿಯಿಂದ, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ: **31.08.2017** ರಿಂದ **10.09.2017** ರವರೆಗೆ ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ.

ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣ ಹಾಗೂ ಶಾಂತಿನಗರ ಬಸ್ ನಿಲ್ದಾಣದಿಂದ ಕೇರಳ ರಾಜ್ಯದ ಪ್ರಮುಖ ಸ್ಥಳಗಳಾದ ಕಣ್ಣಾನೂರು, ಕೋಜಿಕೋಡ್, ಎರ್ನಾಕುಲಂ, ಪಾಲ್ಘಾಟ್, ತ್ರಿಶೂರ್, ಕೊಟ್ಟಾಯಂ ಮುಂತಾದ ಸ್ಥಳಗಳಿಗೆ ವಿಶೇಷ ವಾಹನಗಳ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.

ಇ-ಟಿಕೇಟ್ ಬುಕ್ಕಿಂಗ್‌ನ್ನು www.ksrtc.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ. ಸಾರ್ವಜನಿಕ ಪ್ರಯಾಣಿಕರು ಬೆಂಗಳೂರು ನಗರದಲ್ಲಿರುವ 115, ರಾಜ್ಯದ ಇತರೆ ಸ್ಥಳಗಳಲ್ಲಿರುವ 301 ಹಾಗೂ ಕೇರಳ ರಾಜ್ಯದಲ್ಲಿ 43 ಕೌಂಟರ್ ಒಳಗೊಂಡಂತೆ ಅಂತರರಾಜ್ಯದಲ್ಲಿ 169 ಗಣಕೀಕೃತ ಬುಕಿಂಗ್ ಕೌಂಟರ್‌ಗಳ ಮೂಲಕ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.

ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಕಾಯ್ದಿರಿಸಿದಲ್ಲಿ ಶೇಕಡ 5 ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ನೀಡಲಾಗುವುದು.

ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.

ಮುಂಗಡ ಟಿಕೇಟ್ ಕಾಯ್ದಿರಿಸಲು 30 ದಿನಗಳವರೆಗಿನ ಸೌಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ 080-49596666 ಸಂಖ್ಯೆಯನ್ನು ಸಂಪರ್ಕಿಸಬಹುದು ಮತ್ತು ಇ-ಟಿಕೇಟ್‌ಗಾಗಿ www.ksrtc.in ಗೆ ಲಾಗ್ ಆನ್ ಮಾಡಿ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ 112/112

## ನ್ಯಾಯ ದೊರಕಿಸಲು ಜನತಾ ನ್ಯಾಯಾಲಯ ಸ್ಥಾಪನೆ

**ಬೆಂಗಳೂರು, ಆಗಸ್ಟ್ 30. (ಕರ್ನಾಟಕ ವಾರ್ತೆ)**

**ಜನಸಾಮಾನ್ಯರು ತಮ್ಮ ಯಾವುದೇ ಕಾನೂನಾತ್ಮಕ ವಿವಾದಗಳನ್ನು ಸೆಪ್ಟಂಬರ್ 9 ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ಗೆ ವಹಿಸಿ ಅತ್ಯಂತ ತ್ವರಿತವಾಗಿ ಮತ್ತು ಯಾವುದೇ ವೆಚ್ಚವಿಲ್ಲದೆ ಸಮಾಧಾನಕರವಾದ ಪರಿಹಾರವನ್ನು ಪಡೆಯಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ ತಿಳಿಸಿದೆ.**

**2017** ನೇ ಸಾಲಿನಲ್ಲಿ ಜನವರಿಯಿಂದ ಜುಲೈವರೆಗೆ ನ್ಯಾಯಾಲಯದಲ್ಲಿ ಬಾಕಿ ಇದ್ದಂತಹ **39,292** ಪ್ರಕರಣಗಳನ್ನು ಹಾಗೂ **18,689** ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಲಾಗಿದೆ.

"ಸರ್ವರಿಗೂ ನ್ಯಾಯ" ಎಂಬುದು ಭಾರತದ ಕಾನೂನು ಸೇವೆಗಳ ಧ್ಯೇಯವಾಗಿದೆ. ಜನಸಾಮಾನ್ಯರಿಗೆ ಅತೀ ತ್ವರಿತ ಹಾಗೂ ವೆಚ್ಚವಿಲ್ಲದೆ ನ್ಯಾಯ ದೊರಕಿಸಲು ಜನತಾ ನ್ಯಾಯಾಲಯವನ್ನು ಸ್ಥಾಪಿಸಲಾಗಿದೆ.

ನ್ಯಾಯಾಲಯದ ಮೊರೆ ಹೋಗದೆ ಸರಳ ಹಾಗೂ ಹೆಚ್ಚು ಸಮಯ ಬೇಕಿರದ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ಜನತಾ ನ್ಯಾಯಾಲಯದ ಒಂದು ಸಶಕ್ತ ಆಯುಧವಾಗಿ ಕಾರ್ಯ ನಿರ್ವಹಿಸುತ್ತಿದೆ. ಈ ಉದ್ದೇಶವನ್ನಿಟ್ಟುಕೊಂಡು ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಏರ್ಪಡಿಸಲು ನಿರ್ಧರಿಸಲಾಗಿದ್ದು, ಸದರಿ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಎಲ್ಲಾ ರೀತಿಯ ವ್ಯಾಜ್ಯ ಪೂರ್ವ ಹಾಗೂ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸುವ ಉದ್ದೇಶ ಹೊಂದಲಾಗಿದೆ.

ಸೆಪ್ಟಂಬರ್ **9** ರಂದು ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ಅವರ ವಿವಾದ/ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಉಚ್ಛ ನ್ಯಾಯಾಲಯದ ಕಾನೂನು ಸೇವಾ ಸಮಿತಿಯನ್ನು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳನ್ನು, ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಅಥವಾ ಖಾಯಂ ಜನತಾ ನ್ಯಾಯಾಲಯಗಳನ್ನು ಸಂಪರ್ಕಿಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ;ಜೆಡಿ:ಜಿಪಿಆರ್.

ಸಂಖ್ಯೆ 113/113

# ಆಡಳಿತ ಭಾಷೆ ಕನ್ನಡ ಆಗಿರಬೇಕು: ಎಸ್.ಜಿ.ಸಿದ್ಧರಾಮಯ್ಯ

ಬೆಂಗಳೂರು, ಆಗಸ್ಟ್ **30**. (ಕರ್ನಾಟಕ ವಾರ್ತೆ)

ಇಂಜಿನೀಯರಿಂಗ್ ಹಾಗೂ ವೈದ್ಯಕೀಯ ಕೋರ್ಸ್‌ಗಳನ್ನು ಕಲಿಯಲು ಬೇರೆ ಬೇರೆ ರಾಜ್ಯಗಳಿಂದ, ದೇಶಗಳಿಂದ ವಿದ್ಯಾರ್ಥಿಗಳು ಬಂದಿರುತ್ತಾರೆ. ಅವರೆಲ್ಲರು ಕನ್ನಡವನ್ನು ಕಲಿತರೆ ನಮ್ಮ ಭಾಷೆ ವಿಸ್ತಾರವಾಗುತ್ತದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಜಿ.ಸಿದ್ಧರಾಮಯ್ಯ ಅವರು ತಿಳಿಸಿದರು.

ಇಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದಲ್ಲಿ ಆಡಳಿತದಲ್ಲಿ ಕನ್ನಡ ಭಾಷೆ ಬಳಕೆಯ ಕುರಿತು ಪರಿಶೀಲನೆ ಮಾಡಿದ ನಂತರ ಮಾತನಾಡಿದ ಅವರು ವೈದ್ಯಕೀಯ ವಿದ್ಯಾರ್ಥಿಗಳು ಕನ್ನಡ ಕಡ್ಡಾಯವಾಗಿ ಕಲಿಯಬೇಕು. ಮುಂದಿನ ಶೈಕ್ಷಣಿಕ ವರ್ಷದಿಂದ ಕನ್ನಡದಲ್ಲಿ ಕನಿಷ್ಠ ಅಂಕ ಪಡೆಯಲೇ ಬೇಕು ಇಲ್ಲದಿದ್ದರೆ ಅವರನ್ನು ಅನುತ್ತೀರ್ಣಗೊಳಿಸಲಾಗುವುದು ಎಂದರು.

ವಿಶ್ವವಿದ್ಯಾನಿಲಯ ಸಹ ತನ್ನ ಅಂತರ್ಜಾಲ ತಾಣವನ್ನು ಕನ್ನಡದಲ್ಲಿ ಪ್ರಾರಂಭಿಸಬೇಕು ಮತ್ತು ಕಡತದಲ್ಲಿ ವಿಷಯಗಳನ್ನು ಸಹ ಕನ್ನಡದಲ್ಲಿ ಬರೆಯಬೇಕು. ತಂತ್ರಜ್ಞಾನ ವಿಷಯಗಳಲ್ಲಿ ಕನ್ನಡ ಬಳಕೆಯಾಗಬೇಕು, ಮುಂದಿನ ಒಂದು ತಿಂಗಳ ನಂತರ ಕನ್ನಡ ಬಳಕೆಯ ಜಾರಿ ಕುರಿತು ಮತ್ತೇ ಪರಿಶೀಲನೆ ನಡೆಸಲಾಗುವುದು, ಕನ್ನಡ ಬಳಕೆಯಾಗದಿದ್ದರೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಾಹಿತಿ ಚಂದ್ರಶೇಖರ್ ಪಾಟೀಲ್ ಅವರು ಮಾತನಾಡಿ ರಾಜ್ಯದಲ್ಲಿ ಕನ್ನಡ ಹಿತಾಶಕ್ತಿ ಕಾಪಾಡಬೇಕು, ಯಾವ ಭಾಷೆಯನ್ನೂ ತಿರಸ್ಕಾರ ಮಾಡಬೇಡಿ ಮತ್ತು ಕನ್ನಡವನ್ನು ಮರೆಯಬೇಡಿ. ನಿಜವಾದ ಒಕ್ಕೂಟ ವ್ಯವಸ್ಥೆ ಎಂದರೆ ಕೇಂದ್ರ ಸರ್ಕಾರಕ್ಕೂ ಕೂಡ ಪ್ರಾದೇಶಿಕ ಭಾಷೆಗಳಲ್ಲಿ ಪತ್ರ ಬರೆದು ವ್ಯವಹಾರ ನಡೆಸಿ ನಮ್ಮದೇ ಭಾಷೆಯಲ್ಲಿ ಉತ್ತರ ಪಡೆಯಬೇಕು ಎಂದರು.

ಈ ಸಮಯದಲ್ಲಿ ವಿವಿ ಕುಲಪತಿ ರಮೇಶ್ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಂಖ್ಯೆ 114/114

## ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಎಸ್. ಮಾರೆಪ್ಪ ಅಧಿಕಾರ ಸ್ವೀಕಾರ

**ಬೆಂಗಳೂರು, ಆಗಸ್ಟ್ 30. (ಕರ್ನಾಟಕ ವಾರ್ತೆ)**

ನೂತನವಾಗಿ ಆರಂಭವಾಗಿರುವ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಎಸ್. ಮಾರೆಪ್ಪ ಅವರು ಆಗಸ್ಟ್ 24 ರಂದು ಅಧಿಕಾರ ವಹಿಸಿಕೊಂಡಿದ್ದಾರೆ.

ಎಸ್. ಮಾರೆಪ್ಪ ಅವರು ಆದ್ಯಕ್ಷರಾಗಿರುವ ಈ ನಿಗಮದಲ್ಲಿ ಬೆಂಗಳೂರಿನ ಮುರಳಿ ಅಶೋಕ್ ಸಾಲಪ್ಪ ಮತ್ತು ಎಂ. ವೆಂಕಟೇಶ್, ಮೈಸೂರು ಜಿಲ್ಲೆಯ ಡಿ.ಆರ್. ರಾಜು, ದಾವಣಗೆರೆಯ ಎಸ್. ಮಲ್ಲಿಕಾರ್ಜುನ ಬಿನ್ ಶಾಮಪ್ಪ ಹಾಗೂ ಬೀದರ್ ಜಿಲ್ಲೆಯ ವೆಂಕಟ್‌ರಾವ್ ಶಿಂಧೆ ಅವರು ಈ ನಿಗಮದ ಸದಸ್ಯರಾಗಿರುತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

(ಅಧ್ಯಕ್ಷರ ಛಾಯಾಚಿತ್ರ ಲಗತ್ತಿಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 115/115

# ಗಣಕ ಯುಗದಲ್ಲಿ ಲೆಕ್ಕಪರಿಶೋಧನೆಯ ಸವಾಲುಗಳನ್ನು ಎದುರಿಸಲು ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಕಚೇರಿ ಸನ್ನದ್ಧ

**ಬೆಂಗಳೂರು, ಆಗಸ್ಟ್ 30. (ಕರ್ನಾಟಕ ವಾರ್ತೆ)**

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಸಿಎಜಿ) ಗಣಕೀಕೃತ ರಾಜಸ್ವ ಲೆಕ್ಕಪರಿಶೋಧನಾ ಶ್ರೇಷ್ಠತೆಯ ಕೇಂದ್ರವು (ಸದಾರ್) ರಾಜಸ್ವ ಲೆಕ್ಕಪರಿಶೋಧನೆಯ ಕ್ಷೇತ್ರದಲ್ಲಿ ಇಲಾಖೆಯನ್ನು ಗಣಕ ಯುಗಕ್ಕೆ ಕೊಂಡೊಯ್ಯುವಲ್ಲಿ ಒಂದು ಪ್ರಧಾನ ಪಾತ್ರವನ್ನು ನಿರ್ವಹಿಸಲಿದೆ ಎಂದು ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರಾದ ಶಶಿಕಾಂತ್ ಶರ್ಮ ತಿಳಿಸಿದರು.

ಅವರು ಇಂದು ನೂತನ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿ ಈ ಉದ್ದೇಶಿತ ಕ್ರಮವು, ಸರ್ಕಾರಿ ಲೆಕ್ಕಪರಿಶೋಧನೆಯಲ್ಲಿ ಗಣಕೀಕೃತ ಲೆಕ್ಕಪರಿಶೋಧನೆಯನ್ನು ಕೈಗೊಳ್ಳುವಲ್ಲಿ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಮುಂಚೂಣಿಯತ್ತ ಕೊಂಡೊಯ್ಯುವುದು ಎಂದು ಅಭಿಪ್ರಾಯಪಟ್ಟರು.

ಹಲವಾರು ದತ್ತಮೂಲಗಳನ್ನು ಕ್ರೋಢೀಕರಿಸುವ ಒಂದು ಕೇಂದ್ರೀಯ ದತ್ತ ಭಂಡಾರದ ಸಂಗ್ರಹಣೆಯ ಉದ್ದೇಶದೊಂದಿಗೆ ಹೊಸ ವಿಧಿ ವಿಧಾನಗಳನ್ನು ನಿರೂಪಿಸಲು ಮತ್ತು ವಿವಿಧ ದತ್ತಮೂಲಗಳ ವಿಶ್ಲೇಷಣೆಗೆ ನಿರ್ದಿಷ್ಠ ಮಾದರಿಗಳನ್ನು ಅಭಿವೃದ್ಧಿಪಡಿಸಲು ಸ್ಥಾಪನೆ ಮಾಡಲಾಗಿದೆ.

ಒಂದು ಗಣಕೀಕೃತ ಪರಿಸರದಲ್ಲಿ ರಾಜಸ್ವ ಲೆಕ್ಕಪರಿಶೋಧನೆಯಲ್ಲಿ ಪ್ರವೀಣತೆಯನ್ನು ಅಭಿವೃದ್ಧಿಪಡಿಸುವ ಉದ್ದೇಶವನ್ನು ಸಹ ಅದು ಹೊಂದಿದೆ. ಕೇಂದ್ರವು ಶೀಘ್ರವಾಗಿ ಒದಲಾಗುತ್ತಿರುವ ರಾಜಸ್ವ ನಿರ್ಧಾರಣೆ ಮತ್ತು ಸಂಗ್ರಹಣೆಯ ಪರಿಸ್ಥಿತಿಯಲ್ಲಿ, ರಾಜಸ್ವ ಲೆಕ್ಕಪರಿಶೋಧನೆಯಲ್ಲಿ ಹೊರಬರುತ್ತಿರುವ ಕ್ಷೇತ್ರಗಳಲ್ಲಿ ಮಾಹಿತಿ ಹಂಚಿಕೊಳ್ಳುವಿಕೆ, ಕುಶಲತೆಯ ಅಭಿವೃದ್ಧಿ ಮತ್ತು ಸಂಶೋಧನೆಗೆ ಕೇಂದ್ರವು ಸಹಾಯ ಮಾಡುವುದು.

ಮೊದಲ ಹಂತವಾಗಿ, ಮುಂದಿನ ಎಂಟು ತಿಂಗಳುಗಳಲ್ಲಿ, ಕೇಂದ್ರೀಯ ಪ್ರತ್ಯಕ್ಷ ಮತ್ತು ಅಪ್ರತ್ಯಕ್ಷ ತೆರಿಗೆಗಳಿಗೆ ಸಂಬಂಧಿಸಿದಂತೆ ಎಲ್ಲ ರಾಜಸ್ವ ದತ್ತಾಂಶಗಳ ಸಂಗ್ರಹಣೆ, ತಾಳೆ ನೋಡುವಿಕೆ ಮತ್ತು ವಿಶ್ಲೇಷಣೆಗಾಗಿ ಒಂದು ದತ್ತಾಂಶ ಭಂಡಾರವನ್ನು ಸೆಡಾರ್ ಸ್ಥಾಪಿಸುವುದು. ಈ ಹಂತದಲ್ಲಿ ಶಾಸಕಾಂಗದಲ್ಲಿ ಮಂಡಿಸಲಾಗುವ ಗಣಕೀಕೃತ ಲೆಕ್ಕಪರಿಶೋಧನಾ ವರದಿಗಳಿಗಾಗಿ ಪರೀಕ್ಷಾ ಮಾದರಿಗಳನ್ನು ಮತ್ತು ತಾಂತ್ರಿಕತೆಯನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.

ಸಮಾರಂಭದಲ್ಲಿ ಸಿ.ಎ.ಜಿ. ಅವರು ಸರಕು ಮತ್ತು ಸೇವಾ ತೆರಿಗೆಗಳ (ಜಿಎಸ್‌ಟಿ) ಮೇಲೆ ಇ–ಸಂಹಿತೆಯನ್ನು ಬಿಡುಗಡೆಗೊಳಿಸಿದರು. ಸಿ.ಎ.ಜಿ. ರವರ ಕೇಂದ್ರೀಯ ರಾಜಸ್ವ ಲೆಕ್ಕಪರಿಶೋಧನಾ

ವಿಭಾಗವು ಗಣಕೀಕೃತ ಲೆಕ್ಕಪರಿಶೋಧನಾ ವರದಿಯ ಒಂದು ಪರೀಕ್ಷಾ ಮಾದರಿಯನ್ನು ಮತ್ತು ಲೆಕ್ಕ ಪರಿಶೋಧನಾ ಯೋಜನೆಗಾಗಿ ಸೀಮಾ ಸುಂಕಕ್ಕೆ ಸಂಬಂಧಿಸಿದ ದತ್ತಾಂಶಗಳ ನಿಯಂತ್ರಣ ಸಾಧನಗಳನ್ನು ಹಾಗೂ ಸರಕು ಮತ್ತು ಸೇವಾ ತೆರಿಗೆಗಳ ಬಗ್ಗೆ ವಿದ್ಯುನ್ಮಾನ ಸ್ವ-ನಿರ್ಧಾರಣೆಯ ಸಾಧನವನ್ನು ಪ್ರದರ್ಶಿಸಿದರು.

ಇದು ಗಣಕೀಕೃತ ರಾಜಸ್ವ ಲೆಕ್ಕಪರಿಶೋಧನೆಯಲ್ಲಿ ಇಲಾಖೆಯ ಉದ್ದೇಶ ಮತ್ತು ಸಾಮರ್ಥ್ಯವನ್ನು ಪ್ರಧರ್ಶಿಸಿದ್ದು, ಲೆಕ್ಕಪರಿಶೋಧನೆಯನ್ನು ನಿರ್ವಹಿಸುವಲ್ಲಿ ಹೆಚ್ಚಿನ ದಕ್ಷತೆ, ಪಾರದರ್ಶಕತೆ ಮತ್ತು ವಿಶ್ವಾಸದತ್ತ ಕೊಂಡೊಯ್ಯುವುದು ಎಂದು ವ್ಯಾಖ್ಯಿನಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 116/116

## ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿದರ ಅಭ್ಯರ್ಥಿಗಳಿಗೆ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು ಆಗಸ್ಟ್ 22(ಕರ್ನಾಟಕ ವಾರ್ತೆ)**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿಂದುಳಿದ ವರ್ಗದ ಪತ್ರಿಕೋದ್ಯಮ ಪದವಿ, ಸ್ನಾತಕೋತ್ತರ ಪದವಿ, ವಿದ್ಯುನ್ಮಾನ ಮಾಧ್ಯಮದಲ್ಲಿ ಪದವಿ, ಪಿ.ಜಿ. ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗಾಗಿ ಆರು ದಿವಸಗಳ ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.**

**ಕೆಟಗರಿ 1, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅರ್ಜಿ ನಮೂನೆಯನ್ನು ಪಡೆಯಬಹುದು. ಇಲ್ಲವೆ ಇಲಾಖೆಯ ವೆಬ್‌ಸೈಟ್ www.karnatakainforamtion.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.**

**ಅಭ್ಯರ್ಥಿ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ, ಶೇಕಡಾವಾರು ಅಂಕ, ಉದ್ಯೋಗ ವಿವರ ಹಾಗೂ ಈ ಹಿಂದೆ ಯಾವುದಾದರು ತರಬೇತಿ ಪಡೆದ ವಿವರ ಮತ್ತು ವಿಶೇಷ ಸಾಧನೆಗಳನ್ನೊಳಗೊಂಡ ಸ್ವ ವಿವರಗಳ ಮಾಹಿತಿಗಳನ್ನು ಭರ್ತಿ ಮಾಡಿ ಸ್ವ ವಿಳಾಸ ಇರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು.**

**ಅರ್ಜಿಯೊಂದಿಗೆ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ಧೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 3-10-2017 ರ ಸಂಜೆ 5-00 ಗಂಟೆಯೊಳಗೆ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು 560 001 ಇವರಿಗೆ ಸಲ್ಲಿಸಬೇಕು.**

**ಲಕೋಟೆಯ ಮೇಲ್ಭಾಗದಲ್ಲಿ "ವೃತ್ತಿ ನಿರೂಪಣಾ ಕೌಶಲ್ಯ/ವ್ಯಕ್ತಿ ವಿಕಸನ ತರಬೇತಿಗಾಗಿ ಅರ್ಜಿ (ಹಿಂದುಳಿದ ವರ್ಗ)" ಎಂದು ನಮೂದಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಸುದ್ದಿ ಮತ್ತು ಪತ್ರಿಕಾ ವಿಭಾಗದ, ಉಪ ನಿರ್ದೇಶಕರು ಇವರನ್ನು ದೂರವಾಣಿ ಸಂಖ್ಯೆ 080-22028037/87 ರ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.**

ಸಂಖ್ಯೆ 117/117

**ಹೆಸರಾಂತ ಗಾಯಕ ಹಾಗೂ ಸಂಗೀತ ನಿರ್ದೇಶಕ**
**ಎಲ್ ಎನ್ ಶಾಸ್ತ್ರಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ**

ಬೆಂಗಳೂರು, ಆಗಸ್ಟ್ 30 ( ಕರ್ನಾಟಕ ವಾರ್ತೆ) :

ಕನ್ನಡ ಚಲನಚಿತ್ರ ರಂಗದ ಹೆಸರಾಂತ ಗಾಯಕ ಹಾಗೂ ಸಂಗೀತ ನಿರ್ದೇಶಕ ಎಲ್ ಎನ್ ಶಾಸ್ತ್ರಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕಳೆದ ಎರಡು ದಶಕಗಳಿಂದ ನೂರಾರು ಚಿತ್ರಗಳ ಸಾವಿರಾರು ಗೀತೆಗಳಿಗೆ ಧ್ವನಿಯಾಗಿದ್ದ ಎಲ್ ಎನ್ ಶಾಸ್ತ್ರಿ ಅವರು ಕನ್ನಡ ಚಲನಚಿತ್ರ ಸಂಗೀತ ಲೋಕದಲ್ಲಿ ತಮ್ಮ ವಿಶಿಷ್ಠ ಸ್ವರ ಮಾಧುರ್ಯದ ಮೂಲಕ ಪ್ರೇಕ್ಷಕರ ಹೃನ್ಮನಗಳನ್ನು ಸೆಳೆದಿದ್ದರು. ಗಾಯಕನಾಗಿ ಮಾತ್ರವಲ್ಲದೆ, ಸಂಗೀತ ನಿರ್ದೇಶಕನಾಗಿಯೂ ಅಪಾರ ಜನ ಮನ್ನಣೆ ಗಳಿಸಿದ್ದರು. ಕೆಲ ಕಾಲದಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಎಲ್ ಎನ್ ಶಾಸ್ತ್ರಿ ಅವರು ತಮ್ಮ 47 ನೇ ಜನ್ಮದಿನದ ಮಾರನೇ ದಿನವೇ ಇಹಲೋಹ ತ್ಯಜಿಸಿದ್ದು ನನ್ನಲ್ಲಿ ಅತ್ಯಂತ ನೋವನ್ನು ಉಂಟು ಮಾಡಿದೆ ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಎಲ್ ಎನ್ ಶಾಸ್ತ್ರಿ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಶ್ರೀಯುತರ ಕುಟುಂಬ ವರ್ಗ ಹಾಗೂ ಅಭಿಮಾನಿ ವರ್ಗಕ್ಕೆ ಎಲ್ ಎನ್ ಶಾಸ್ತ್ರಿ ಅವರ ಅಗಲಿಕೆಯಿಂದ ಉಂಟಾದ ದುಃಖ ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

**************

ಡಿ ಪಿ ಎಂ